# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 856 (903)

**ಸದಸ್ಯರ ಹೆಸರು** : Click here to download Annexure

**ಉತ್ತರಿಸಬೇಕಾದ ದಿನಾಂಕ** : 15.12.2025

**ಉತ್ತರಿಸುವವರು** : ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 5 ವರ್ಷಗಳಲ್ಲಿ ಅರಣ್ಯ ಬೆಳವಣಿಗೆಯ ಮಾಹಿತಿ ನೀಡುವುದು ಹಾಗೂ 2018 ರಿಂದ ಇಲ್ಲಿಯವರೆಗೆ ಅರಣ್ಯ ಅಭಿವೃದ್ಧಿಗಾಗಿ ಸರ್ಕಾರ ಖರ್ಚು ಮಾಡಲಾದ ಅನುದಾನ ಎಷ್ಟು; (ವರ್ಷಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ಕಳೆದ 5 ವರ್ಷಗಳ ಅರಣ್ಯ ಬೆಳವಣಿಗೆಯ ಮಾಹಿತಿ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ವರ್ಷ</th><th>ನೆಡುತೋಪು ನಿರ್ಮಾಣ (ಹೆ.ಗಳಲ್ಲಿ)</th><th>ನೆಟ್ಟ ಸಸಿಗಳ ಸಂಖ್ಯೆ (ಲಕ್ಷಗಳಲ್ಲಿ)</th></tr>
<tr><td>1</td><td>2020-21</td><td>82,245</td><td>455.768</td></tr>
<tr><td>2</td><td>2021-22</td><td>40,239</td><td>251.037</td></tr>
<tr><td>3</td><td>2022-23</td><td>47,773</td><td>303.898</td></tr>
<tr><td>4</td><td>2023-24</td><td>50,532</td><td>276.667</td></tr>
<tr><td>5</td><td>2024-25</td><td>57,046</td><td>280.723</td></tr>
</table>
2018 ರಿಂದ ಇಲ್ಲಿಯವರೆಗೆ ಅರಣ್ಯ ಅಭಿವೃದ್ಧಿಗಾಗಿ ಸರ್ಕಾರ ಖರ್ಚು ಮಾಡಲಾದ ಅನುದಾನದ ವರ್ಷವಾರು ಮತ್ತು ತಾಲ್ಲೂಕುವಾರು ವಿವರವನ್ನು ಅನುಬಂಧ-1 ರಿಂದ 7 ರಲ್ಲಿ ಒದಗಿಸಿದೆ.</td></tr>
<tr><td>ಆ)</td><td>ಅರಣ್ಯ ಅಭಿವೃದ್ಧಿಗಾಗಿ ಸಾರ್ವಜನಿಕರಿಗೆ ಹಾಗೂ ರೈತರಿಗೆ ಅರಿವು ಮೂಡಿಸುವಲ್ಲಿ ಸರ್ಕಾರ ಹಾಕಿಕೊಂಡಿರುವ ಯೋಜನೆಗಳು ಯಾವುವು; ಬಯಲು ಸೀಮೆ ಎಂಬ ಹಣೆಪಟ್ಟಿ ಕಟ್ಟಿಕೊಂಡಿರುವ ಉತ್ತರ ಕರ್ನಾಟಕ ಭಾಗದಲ್ಲಿ ಅರಣ್ಯ ಪ್ರದೇಶ ವಿಸ್ತರಣೆಗಾಗಿ ಸರ್ಕಾರ ಯಾವ ಯಾವ ಉತ್ತೇಜನಕಾರಿ ಯೋಜನೆಗಳನ್ನು ಹಾಕಿಕೊಂಡಿದೆ;</td><td>ಅರಣ್ಯ ಅಭಿವೃದ್ಧಿಗಾಗಿ ಸಾರ್ವಜನಿಕರಿಗೆ ಹಾಗೂ ರೈತರಿಗೆ ಅರಿವು ಮೂಡಿಸುವಲ್ಲಿ ಸರ್ಕಾರ ಹಾಕಿಕೊಂಡಿರುವ ಯೋಜನೆಗಳು ಈ ಕೆಳಗಿನಂತಿವೆ.<br>1. ಸಾರ್ವಜನಿಕರಿಗೆ ವಿತರಣೆಗಾಗಿ ಸಸಿ ಬೆಳೆಸಿ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ.<br>2. ವನ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.<br>3. RKVY ಯೋಜನೆ ಅಡಿಯಲ್ಲಿ ಪ್ರೋತ್ಸಾಹ ಧನ ವಿತರಣೆ ಮಾಡಲಾಗಿರುತ್ತದೆ.<br><br>ಉತ್ತರ ಕರ್ನಾಟಕ ಭಾಗದಲ್ಲಿ ಅರಣ್ಯ ಹೊದಿಕೆಯ ವಿಸ್ತರಣೆಗಾಗಿ ಸರ್ಕಾರ ಈ ಕೆಳಕಂಡ ಉತ್ತೇಜನಕಾರಿ ಯೋಜನೆಗಳನ್ನು ಹಾಕಿಕೊಂಡಿದೆ.<br>1. ಅರಣ್ಯ ಪ್ರದೇಶಗಳಲ್ಲಿ ಅರಣ್ಯೀಕರಣ ಕಾಮಗಾರಿ<br>2. ಅರಣ್ಯೇತರ ಪ್ರದೇಶಗಳಲ್ಲಿ ಅರಣ್ಯೀಕರಣ ಕಾಮಗಾರಿ<br>3. ಇತರೆ ಅರಣ್ಯ ಪ್ರದೇಶಗಳಲ್ಲಿ ಅರಣ್ಯೀಕರಣ<br>4. ಕಾಂಪಾ<br>5. ಕೆ.ಎಫ್.ಡಿ.ಎಫ್ ಪ್ಲೆಕ್ಸಿ ಫಂಡ್</td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಇ) | ಅರಣ್ಯ ಪ್ರದೇಶ ಒತ್ತುವರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಒತ್ತುವರಿ ಮಾಡಿರುವ ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು; ಒತ್ತುವರಿದಾರರ ವಿರುದ್ಧ ದಾಖಲಾದ ಪುರಕಣಗಳು ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು **1,20,491** ಪ್ರಕರಣಗಳನ್ನು ದಾಖಲಿಸಿದ್ದು, ಒತ್ತುವರಿ ಆಗಿರುವ ಅರಣ್ಯ ಭೂಮಿ **221263** ಎಕರೆ **4** ಗುಂಟೆ ಆಗಿರುತ್ತದೆ. ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ-8 ರಲ್ಲಿ** ಒದಗಿಸಿದೆ. |
| ಈ) | ಅರಣ್ಯ ಪ್ರದೇಶ ಒತ್ತುವರಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ➢ ಕ್ಷೇತ್ರ ಮಟ್ಟದ ಸಿಬ್ಬಂದಿ ಅರಣ್ಯ ಗಡಿಗಳಲ್ಲಿ ನಿರಂತರವಾಗಿ ಗಸ್ತು ಕಾರ್ಯ ನಿರ್ವಹಿಸುತ್ತಾರೆ.<br>➢ ಅತಿಕ್ರಮಣಗಳನ್ನು ಪತ್ತೆ ಹಚ್ಚಲು, ಕರ್ನಾಟಕ ಅರಣ್ಯ ಇಲಾಖೆಯು ಉಪಗ್ರಹ ಕಣ್ಗಾವಲು ವ್ಯವಸ್ಥೆ (ಫಾರೆಸ್ಟ್ ಕವರ್ ಚೇಂಜ್ ಅಲರ್ಟ್ ಸಿಸ್ಟಮ್) ಎಂಬ ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ, ಇದರಲ್ಲಿ ಉಪಗ್ರಹ ಚಿತ್ರಗಳ ವಿಶ್ಲೇಷಣೆಯ ಆಧಾರದ ಮೇಲೆ ಕ್ಷೇತ್ರ ಅಧಿಕಾರಿಗಳಿಗೆ ತಕ್ಷಣವೇ SMS ಮೂಲಕ ಎಚ್ಚರಿಕೆಗಳನ್ನು ನೀಡಲಾಗುತ್ತಿದೆ.<br>➢ ಅರಣ್ಯ ಭೂಮಿ ಒತ್ತುವರಿ ಮಾಡಿಕೊಂಡವರ ವಿರುದ್ಧ ಅರಣ್ಯ ಅಪರಾಧ ಮೊಕದ್ದಮೆ ದಾಖಲಿಸಲಾಗುತ್ತದೆ.<br>➢ ಒತ್ತುವರಿಯಾದ ಅರಣ್ಯ ಭೂಮಿಯನ್ನು ಇಲಾಖೆಗೆ ಹಿಂಪಡೆಯಲು ಕರ್ನಾಟಕ ಅರಣ್ಯ ಕಾಯ್ದೆ 1963 ರ ಕಲಂ-64(ಎ)ರಡಿ ತೆರವು ಕಾರ್ಯಚರಣೆ ನಿರಂತರ ಪ್ರಕ್ರಿಯೆಯಾಗಿರುತ್ತದೆ.<br>ಅರಣ್ಯ ಪ್ರದೇಶದ ಗಡಿ ಬಲವರ್ಧನೆಗಾಗಿ ಅವಶ್ಯಕತೆಗನುಗುಣವಾಗಿ ದನ ನಿರೋಧಕ ಕಂದಕ ನಿರ್ಮಾಣ, ಚೈನ್‌ಲಿಂಕ್ ಮೆಶ್ ಅಳವಡಿಕೆ, ತಂತಿಬೇಲಿ ಅಳವಡಿಕೆ, ಆರ್.ಸಿ.ಸಿ ಪಿಲ್ಲರ್‌ಗಳ ಅಳವಡಿಕೆ, ಕಾಂಪೌಂಡ್ ವಾಲ್ ನಿರ್ಮಾಣ, ಪ್ರೀ ಕಾಸ್ಟ್ ಕಾಂಪೌಂಡ್ ವಾಲ್ ನಿರ್ಮಾಣ ಮಾಡಲಾಗುತ್ತಿದೆ. |

ಸಂಖ್ಯೆ: ಅಪಜೀ 60 ಎಫ್ ಟಿ ಎಸ್ 2025

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು